ಬಾಲಕಾರ್ಮಿಕ ಮುಕ್ತ ರಾಜ್ಯವನ್ನಾಗಿ ಮಾಡುವ ಬಗ್ಗೆ

26(18): ಶ್ರೀ ನರೇಂದ್ರಬಾಬು ನೆ.ಲ. (ಮಹಾಲಕ್ಷ್ಮೀ ಲೇಔಟ್): ಮಾನ್ಯ ಕಾರ್ಮಿಕ ಮತ್ತು ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾಲಕಾರ್ಮಿಕ ಮುಕ್ತ ರಾಜ್ಯವನ್ನಾಗಿ ಮಾಡುವುದಾಗಿ ಕಾರ್ಮಿಕ ಇಲಾಖೆಯು ಘೋಷಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು);

ಆ) ಹಾಗಿದ್ದಲ್ಲಿ, ಬಾಲ ಕಾರ್ಮಿಕ ಪದ್ಧತಿಯನ್ನು ತೆಗೆದುಹಾಕಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು;

ಇ) ಬಾಲ ಕಾರ್ಮಿಕ ಮುಕ್ತ ರಾಜ್ಯವನ್ನಾಗಿ ಮಾಡುವ ಯೋಜನೆ ಮುಂದೂಡಲ್ಪಟ್ಟಿರುವುದು ನಿಜವೇ ಹಾಗೂ ಸರ್ಕಾರವು ಇದಕ್ಕೆ ಅನುಮತಿಸಿದೆಯೇ?

ಶ್ರೀ ಬಿ.ಎನ್ ಬಚ್ಚೇಗೌಡ (ಕಾರ್ಮಿಕ ಮತ್ತು ರೇಷ್ಮೆ ಸಚಿವರು):

ಅ) ಮೇ 2001ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯವನ್ನು "ಬಾಲ ಕಾರ್ಮಿಕ ಪದ್ಧತಿ ಮುಕ್ತ ರಾಜ್ಯ" ವನ್ನಾಗಿ ಮಾಡಬೇಕೆಂದು ಘೋಷಣೆ ಮಾಡಿದ್ದು, ರಾಷ್ಟ್ರದಲ್ಲಿ ಪ್ರಥಮ ಬಾರಿಗೆ ರಾಜ್ಯ ಮಟ್ಟದ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿದ ರಾಜ್ಯವಾಗಿರುತ್ತದೆ.

ಆ) 1. ಬಾಲ ಕಾರ್ಮಿಕ ಪದ್ಧತಿಯನ್ನು ನಿಯಂತ್ರಿಸಲು ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರ ಕಲಂ 3 ಮತ್ತು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961ರ ಕಲಂ 24ನ್ನು ಜಾರಿಗೆ ತರಲಾಗುತ್ತಿದೆ.

2. ಮೇಲೆ ವಿವರಿಸಿರುವ ಎರಡೂ ಕಾಯ್ದೆಗಳನ್ನು ಅನುಷ್ಠಾನಕ್ಕೆ ತರಲು ಕಾರ್ಮಿಕ ಇಲಾಖೆಯಲ್ಲದೇ ರಾಜ್ಯದ ವಿವಿಧ ಇಲಾಖೆಗಳ ಒಟ್ಟು 2050 ಅಧಿಕಾರಿಗಳನ್ನು ನಿರೀಕ್ಷಕರೆಂದು ಸರ್ಕಾರ ನೇಮಕ ಮಾಡಿದೆ.

3. ತನಿಖೆಯಿಂದ ಮತ್ತು ಸಮೀಕ್ಷೆಯಿಂದ ಪತ್ತೆ ಹಚ್ಚಲಾದ ಬಾಲ ಕಾರ್ಮಿಕರ ಪುನರ್‌ವಸತಿಗಾಗಿ ಸರ್ಕಾರ 2001ರಲ್ಲಿ ಕ್ರಿಯಾ ಯೋಜನೆಯನ್ನು ಜಾರಿಗೆ ತಂದಿರುತ್ತದೆ.

4. ರಾಜ್ಯ ಕ್ರಿಯಾ ಯೋಜನೆ ಹಾಗೂ ರಾಷ್ಟ್ರೀಯ ಬಾಲ ಕಾರ್ಮಿಕರ ಯೋಜನೆಯ ಮೂಲಕ 2001–02ನೇ ಸಾಲಿನಿಂದ 2010–11ನೇ ಸಾಲಿನವರೆಗೆ ಒಟ್ಟು 1,01,501 ಬಾಲಕಾರ್ಮಿಕರನ್ನು

ಕೆಲಸದಿಂದ ಬಿಡುಗಡೆಗೊಳಿಸಿ ಅನೌಪಚಾರಿಕ ಶಾಲೆಗಳಿಗೆ ಸೇರಿಸುವ ಮೂಲಕ ಪುನರ್ವಸತಿ ಕಲ್ಪಿಸಲಾಗಿದೆ.

5. ದಿನನಿತ್ಯದ ತನಿಖೆಗಳಲ್ಲದೆ ಬಾಲ ಕಾರ್ಮಿಕರ ಪತ್ತೆಗಾಗಿ ಅಧಿಕಾರಿಗಳ ತಂಡ ರಚಿಸಿ ಹಠಾತ್ ದಾಳಿಗಳನ್ನು ನಡೆಸಲಾಗುತ್ತಿದೆ. ತಂಡದಲ್ಲಿ ಕಾರ್ಮಿಕ ಶಿಕ್ಷಣ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಪೊಲೀಸ್ ಮತ್ತು ರಾಜ್ಯ ವಿಮಾ ಇಲಾಖೆಯ ವೈದ್ಯಾಧಿಕಾರಿಗಳು ಸಹ ಇರುತ್ತಾರೆ.

6. ಬಾಲ ಕಾರ್ಮಿಕರನ್ನು ಪತ್ತೆ ಹಚ್ಚಿದ ತಕ್ಷಣ ಅವರನ್ನು ರಾಜ್ಯ ಸರ್ಕಾರ ನಡೆಸುತ್ತಿರುವ ವಿಶೇಷ ವಸತಿ ಶಾಲೆಗಳಿಗೆ ಮತ್ತು ರಾಷ್ಟ್ರೀಯ ಬಾಲ ಕಾರ್ಮಿಕ ಯೋಜನೆಯ ಶಾಲೆಗಳಿಗೆ ದಾಖಲು ಮಾಡುವುದಲ್ಲದೆ ಕೆಲವು ಸಂದರ್ಭಗಳಲ್ಲಿ ಬಿಡುಗಡೆಯಾದ ಬಾಲ ಕಾರ್ಮಿಕರನ್ನು ನೇರವಾಗಿ ಮುಖ್ಯವಾಹಿನಿ ಶಾಲೆಗಳಿಗೆ ಸೇರಿಸಲಾಗುತ್ತಿದೆ.

7. ಬಾಲ ಕಾರ್ಮಿಕರನ್ನು ನೇಮಕ ಮಾಡಿಕೊಂಡ ತಪ್ಪಿತಸ್ಥ ಮಾಲೀಕರ ವಿರುದ್ಧ 2001 ರಿಂದ 2011 ರವರೆಗೆ 18,977 ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಿದ್ದು, ಇತ್ಯರ್ಥವಾಗಿರುವ 1,615 ಪ್ರಕರಣಗಳಲ್ಲಿ ರೂ. 81,81,285 ರೂ.ಗಳನ್ನು ನ್ಯಾಯಾಲಯ ದಂಡವಾಗಿ ವಿಧಿಸಲಾಗಿದೆ.

8. ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಪ್ರಕಾರ ಅಪಾಯಕಾರಿ ಕೆಲಸಗಳಲ್ಲಿ ಬಾಲ ಕಾರ್ಮಿಕರನ್ನು ನೇಮಕ ಮಾಡಿ ಕೊಂಡಿರುವ ಮಾಲೀಕರಿಂದ ಪ್ರತಿ ಬಾಲ ಕಾರ್ಮಿಕನಿಗೆ ಸಂಬಂಧಿಸಿದಂತೆ ರೂ. 20,000/- ಗಳನ್ನು ಪರಿಹಾರವಾಗಿ ವಸೂಲಿ ಮಾಡುತ್ತಿದ್ದು, ಇದುವರೆವಿಗೂ ರೂ. 31,00,000/- ಗಳನ್ನು ಪರಿಹಾರವಾಗಿ ವಸೂಲಿ ಮಾಡಲಾಗಿದೆ. ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಕಾರ್ಮಿಕ ಪುನರ್‌ವಸತಿ ಕಲ್ಯಾಣ ನಿಧಿ (Corpus Fund) ಯನ್ನು ಸ್ಥಾಪಿಸಲಾಗಿದೆ.

9. ಪ್ರತಿ ಜಿಲ್ಲೆಯಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬಾಲ ಕಾರ್ಮಿಕ ಯೋಜನಾ ಸೊಸೈಟಿಗಳನ್ನು ರಚಿಸಿದ್ದು ಯೋಜನಾ ಸೊಸೈಟಿಗಳ ಮೂಲಕ ಬಾಲ ಕಾರ್ಮಿಕರಿಗೆ ಪುನರ್ ವಸತಿಯನ್ನು ಕಲ್ಪಿಸಲಾಗುತ್ತಿದೆ. ಜಿಲ್ಲಾ ಸೊಸೈಟಿಗಳ ಮೂಲಕ ರಾಜ್ಯ ಬಾಲ ಕಾರ್ಮಿಕರ ಯೋಜನೆಯಡಿಯಲ್ಲಿ ವಿಶೇಷ ವಸತಿ ಶಾಲೆ ಮತ್ತು ರಾಷ್ಟ್ರೀಯ ಬಾಲ ಕಾರ್ಮಿಕರ ಯೋಜನೆಯಡಿಯಲ್ಲಿ ವಿಶೇಷ ದಿನ ಶಾಲೆಗಳನ್ನು ನಡೆಸಲಾಗುತ್ತಿದೆ.

10. ಬಾಲ ಕಾರ್ಮಿಕ ಪದ್ಧತಿ ಅನುಷ್ಠಾನದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ನಿಯಮಿತವಾಗಿ ಜನಜಾಗೃತಿ ಕಾರ್ಯಕ್ರಮವನ್ನು ಮಾಡಲಾಗುತ್ತಿದೆ. ಕರ್ನಾಟಕ ರಾಜ್ಯ ಕಾನೂನು ಅರಿವು ಪ್ರಾಧಿಕಾರದೊಂದಿಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಅರಿವು ಕಾರ್ಯಕ್ರಮವನ್ನು ಮಾಡಲಾಗುತ್ತಿದೆ.

11. ಪ್ರತಿ ವರ್ಷ ಜೂನ್ 12 ರಂದು "ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ" ದಿನವನ್ನಾಗಿ ಆಚರಿಸಲಾಗುತ್ತಿದೆ.

12. ಬಾಲ ಕಾರ್ಮಿಕರ ಬಗ್ಗೆ ಮಾಹಿತಿ/ದೂರು ನೀಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ಉಚಿತ ಸಹಾಯವಾಣಿ ಕೇಂದ್ರವನ್ನು ತೆರೆಯಲಾಗಿದೆ.

13. ಶಿಕ್ಷಣವನ್ನು ಮುಂದುವರಿಸಲಾಗದ 14 ವರ್ಷ ಮೇಲ್ಪಟ್ಟ ಬಾಲ ಕಾರ್ಮಿಕರಿಗೆ ಶಿಕ್ಷಣದ ನಂತರ ಸ್ವಂತ ವೃತ್ತಿ ಪ್ರಾರಂಭಿಸಲು "ಕೌಶಲ್ಯ ಅಭಿವೃದ್ಧಿ" (Skill Development) ಯೋಜನೆಯನ್ನು ಜಾರಿಗೆ ತರಲು ಕಾರ್ಯಕ್ರಮವನ್ನು ರೂಪಿಸಲಾಗುತ್ತಿದೆ.

14. ಬದಲಾಗುತ್ತಿರುವ ಪರಿಸ್ಥಿತಿಗೆ ಅನುಗುಣವಾಗಿ 2001ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಇದ್ದ ಉದ್ದೇಶವನ್ನು ಒಳಗೊಂಡಂತೆ ಹಿಂದಿನ ಕ್ರಿಯಾ ಯೋಜನೆಯಲ್ಲಿನ ಕೆಲವು ಕೊರತೆಗಳನ್ನು ಗುರುತಿಸಿ ಹೆಚ್ಚು ಪರಿಣಾಮಕಾರಿಯಾಗಿ ಯೋಜನೆಯನ್ನು ಜಾರಿಗೆ ತರಲು ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಇತರೆ ಇಲಾಖೆಗಳ ಸಂಪೂರ್ಣ ಸಹಕಾರದೊಂದಿಗೆ ಕ್ರಿಯಾ ಯೋಜನೆಯನ್ನು ಪುನರ್ ರಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) 2001 ರಲ್ಲಿ ರಚಿಸಿದ್ದ ರಾಜ್ಯ ಬಾಲ ಕಾರ್ಮಿಕ ಕ್ರಿಯಾ ಯೋಜನೆಯನ್ನು 2012ನೇ ಸಾಲಿನವರೆಗೆ ವಿಸ್ತರಿಸಲಾಗಿತ್ತು. ಹಿಂದಿನ ಕ್ರಿಯಾ ಯೋಜನೆಯಲ್ಲಿ ಕೆಲವು ಕೊರತೆಗಳನ್ನು (short comings) ಗುರುತಿಸಿ ಸದರಿ ಕ್ರಿಯಾ ಯೋಜನೆಯನ್ನು ಪುನರ್ ರಚಿಸಿ ಅದನ್ನು 2010 ರಿಂದ 2017ನೇ ಸಾಲಿನವರೆಗೆ ಮುಂದುವರೆಸಿ ಅನುಷ್ಠಾನಗೊಳಿಸಲು ಪರಿಶೀಲಿಸಲಾಗುತ್ತಿದೆ.